SI.A.No. 1/2023

AW-1

ದಿನಾಂಕಃ 02-08-2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲುಃ- ಎದುರುದಾರರ ಪರವಾಗಿಃ ಶ್ರೀ. ಎಂ ಎಸ್ ವಿ ವಕೀಲರಿಂದ ಃ
ನಾನು ಈ ಪ್ರಕರಣದ ವಿಚಾರಣೆಯಲ್ಲಿ ಅರ್ಜಿದಾರರ ಪರವಾಗಿ ಪಕ್ಷಾತೀತ ವಿಚಾರಣೆಯನ್ನು ಮಾಡಿರುತ್ತೇನೆ ಎಂದರೆ ಸರಿಯಲ್ಲ . ಅರ್ಜಿದಾರರ ಸ್ಟಾಂಡಿಂಗ್ ಆರ್ಡರ್ ನಲ್ಲಿ ವಿಚಾರಣಾ ಕಾಲಕ್ಕೆ ಪ್ರಾಥಮಿಕ ವಿಚಾರಣೆ ಮಾಡಬೇಕು ಎಂದರೆ ನನಗೆ ಗೊತ್ತಿಲ್ಲ . ಅರ್ಜಿದಾರರು ವಿಚಾರಣಾ ಕಾಲಕ್ಕೆ ಪೂರಕ ದಾಖಲಾತಿಗಳನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ . ಎದುರುದಾರರು ನೀಡಿದಂತಹ ಹೇಳಿಕೆ ಮತ್ತು ದಾಖಲಾತಿಗಳನ್ನು ನನ್ನ ವಿಚಾರಣಾ ವರದಿಯಲ್ಲಿ ಪರಿಗಣಿಸಿರುವುದಿಲ್ಲ ಎಂದರೆ ಸರಿಯಲ್ಲ . ಎದುರುದಾರರಿಗೆ ವಿಚಾರಣಾ ಕಾಲಕ್ಕೆ ನಾನು ಸಾಕಷ್ಟು ಅವಕಾಶಗಳನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ . ಎದುರುದಾರರ ಮೇಲೆ ಇದ್ದಂತಹ 7 ಆಪಾದನೆಗಳ ಮೇಲೆ ನಾನು ವಿಚಾರಣಾ ವರದಿಯನ್ನು ನೀಡಿರುತ್ತೇನೆ ಎಂದರೆ ಸರಿ .

ಎದುರುದಾರರ ಪರವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು ಸಮಯ ನೀಡಲಾಯಿತು.

ಮರು ವಿಚಾರಣೆಃ ಇಲ್ಲ

(ಸಾಕ್ಷಿಯು ಕೊಟ್ಟ ಸಾಕ್ಷ್ಯವನ್ನು ನನ್ನ ಉಕ್ತ ಲೇಖನದಂತೆ ಬಹಿರಂಗ ನ್ಯಾಯಾಲಯದಲ್ಲಿ ಗಣಕೀಕರಿಸಲಾಯಿತು.)

(ಮೇಲಿನ ಸಾಕ್ಷ್ಯವನ್ನು ಸಾಕ್ಷಿಗೆ ಓದಿ , ತಿಳಿಸಿ , ಹೇಳಿದಾಗ ಅವರು ಸರಿ ಇದೆ ಎಂದು ಒಪ್ಪಿದ್ದಾರೆ).

(ಸಂಧ್ಯಾ ರಾವ್ ಪಿ.),
ಅಧ್ಯಕ್ಷಾಧಿಕಾರಿಗಳು/ಜಡ್ಜ್
ಔದ್ಯಮಿಕ ನ್ಯಾಯಾಧೀಕರಣ,
ಮೈಸೂರು.